**All India Radio: Bangalore**
**Regional Bulletin In Kannada**
**03.08.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03 .08.2025 / 2.30 p.m.**

ಮುಖ್ಯಾಂಶಗಳು :

- ಕೋಮುವಾದ ಹೀನಕೃತ್ಯಕ್ಕೆ ಪ್ರೇರಣೆಯಾಗುತ್ತಿರುವುದು ಆತಂಕಕಾರಿ - ಮುಖ್ಯಮಂತ್ರಿ ಸಿದ್ದರಾಮಯ್ಯ
- ರೈತರ ಆತ್ಮಹತ್ಯೆ ಸಂಪೂರ್ಣ ತಡೆಗಟ್ಟಲು ಸರ್ಕಾರ ಬದ್ಧ - ಸಚಿವ ಎನ್. ಚೆಲುವರಾಯಸ್ವಾಮಿ
- ಆಲಮಟ್ಟಿ ಆಣೆಕಟ್ಟು ಎತ್ತರಿಸಲು ಮಹಾರಾಷ್ಟ್ರ ಅಡ್ಡಗಾಲು- ಸಚಿವ ಶರಬಸಪ್ಪ ದರ್ಶನಾಪುರ್ ಅಸಮಾಧಾನ
- ಬೂತ್ ಮಟ್ಟದ ಅಧಿಕಾರಿಗಳ ಸಂಭಾವನೆ ದ್ವಿಗುಣಗೊಳಿಸಿದ ಚುನಾವಣಾ ಆಯೋಗ
- ದೆಹಲಿ ಸ್ವಾತಂತ್ರೋತ್ಸವ ದಿನಾಚರಣೆಯಲ್ಲಿ ಭಾಗವಹಿಸಲು ರಾಜ್ಯದ ಏಳು ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ವಿಶೇಷ ಆಹ್ವಾನ

><><><><><><><><><

ಧಾರ್ಮಿಕ ಮೂಲಭೂತವಾದ, ಕೋಮುವೈಷಮ್ಯ ಎನ್ನುವುದು ಎಂತಹ ಹೀನ ಕೃತ್ಯವನ್ನೂ ಮಾಡಿಸಬಲ್ಲುದು ಎಂಬುದಕ್ಕೆ ಪುಟ್ಟಮಕ್ಕಳ ಮಾರಣಹೋಮಕ್ಕೆ ಕಾರಣವಾಗಬಹುದಾಗಿದ್ದ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹೂಲಿಕಟ್ಟಿ ಗ್ರಾಮದ ಸರ್ಕಾರಿ ಶಾಲೆಯ ಕುಡಿಯುವ ನೀರಿಗೆ ವಿಷ ಹಾಕಿದ ಘಟನೆಯೇ ಸಾಕ್ಷಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಹೂಲಿಕಟ್ಟಿ ಗ್ರಾಮದ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯರು ಅನ್ಯಧರ್ಮಕ್ಕೆ ಸೇರಿದವರಾಗಿರುವುದರಿಂದ ಅವರನ್ನು ಬೇರೆಡೆಗೆ ವರ್ಗಾವಣೆ ಮಾಡಿಸುವ ದುರುದ್ದೇಶದಿಂದ ಶಾಲಾಮಕ್ಕಳ ಕುಡಿಯುವ ನೀರಿಗೆ ವಿಷ ಹಾಕಿದ ಶ್ರೀರಾಮ ಸೇನೆಯ ತಾಲೂಕು ಅಧ್ಯಕ್ಷ ಸಾಗರ ಪಾಟೀಲ ಸೇರಿದಂತೆ ಒಟ್ಟು ಮೂವರನ್ನು ಬಂಧಿಸಲಾಗಿದೆ ಎಂದು ಹೇಳಿದ್ದಾರೆ. ಕಳೆದ ೧೫ ದಿನಗಳ ಹಿಂದೆ ನಡೆದ ಈ ಘಟನೆಯಲ್ಲಿ ಹಲವು ಮಕ್ಕಳು ಅಸ್ವಸ್ಥಗೊಂಡಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿ ಸಂಭವಿಸಿರಲಿಲ್ಲ. ಮಕ್ಕಳ ಹತ್ಯಾಕಾಂಡ ನಡೆಸುವ ದುಷ್ಟ ಹುನ್ನಾರವನ್ನು ಭೇದಿಸಿದ ಪೊಲೀಸ್ ಸಿಬ್ಬಂದಿಯನ್ನು ಮುಖ್ಯಮಂತ್ರಿ ಅಭಿನಂದಿಸಿದ್ದಾರೆ.

><><><><><><><><><

ರಾಜ್ಯದಲ್ಲಿ ರೈತರ ಆತ್ಮಹತ್ಯೆಯನ್ನು ಪೂರ್ಣಪ್ರಮಾಣದಲ್ಲಿ ನಿಲ್ಲಿಸುವ ಉದ್ದೇಶದಿಂದ ಐದು ಗ್ಯಾರಂಟಿ ನೀಡಲಾಗಿದೆ. ಆದರೂ ಆತ್ಮಹತ್ಯೆ ಪ್ರಕರಣಗಳು ಮುಂದುವರೆಯುತ್ತಿವೆ. ಯಾವ ಕಾರಣಕ್ಕಾಗಿ ಆತ್ಮಹತ್ಯೆ ಆಗುತ್ತಿವೆ ಎಂಬುದು ನಿಖರವಾಗಿ ತಿಳಿದುಬಂದಿಲ್ಲ. ಈ ಕುರಿತು ಪೊಲೀಸರ

ತಂಡ ರಚಿಸಿ ತನಿಖೆ ನಡೆಸಲಾಗಿದೆ. ಈ ಕುರಿತು ಮುಖ್ಯಮಂತ್ರಿಯೊಂದಿಗೆ ಚರ್ಚೆ ನಡೆಸಲಾಗುವುದು ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಖಾಸಗಿ ಸಂಸ್ಥೆಯಿಂದ ತನಿಖೆ ನಡೆಸಲು ಸೂಚನೆ ನೀಡಿದ್ದಾರೆ. ಪ್ರಸ್ತುತ ರೈತ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಕಡಿಮೆ ಆಗಿದೆ. ರೈತರ ಆತ್ಮಹತ್ಯೆ ಸಂಪೂರ್ಣ ನಿಲ್ಲಬೇಕು ಎಂದು ಅವರು ಹೇಳಿದರು. ರಾಜ್ಯ ಸರ್ಕಾರಕ್ಕೆ ರಸಗೊಬ್ಬರ ಕಳುಹಿಸುವುದು ಕೇಂದ್ರ ಸರ್ಕಾರ. ರಸಗೊಬ್ಬರ ತಯಾರಿಕೆ ಮಾಡುವ, ದರ ನಿಗದಿ, ಆಮದು ಮಾಡಿಕೊಳ್ಳುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಧ್ವನಿ- ಎನ್.ಚಲುವರಾಯಸ್ವಾಮಿ, ಕೃಷಿ ಸಚಿವ

><><><><><><><><><><

ರಸಗೊಬ್ಬರ ಸಮಸ್ಯೆ ಕುರಿತು ರಾಜ್ಯದ ಎಲ್ಲಾ ಸಂಸದರು ಕೇಂದ್ರ ರಸಗೊಬ್ಬರ ಸಚಿವ ಜೆ.ಪಿ.ನಡ್ಡಾರನ್ನು ಭೇಟಿ ಮಾಡಿ ಮನವರಿಕೆ ಮಾಡಿದ್ದು, ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾದ ಯೂರಿಯಾ, ಡಿಎಪಿ ಸೇರಿದಂತೆ ೮.೫ ಮೆಟ್ರಿಕ್ ಟನ್ ರಸಗೊಬ್ಬರ ರೈತರಿಗೆ ಪೂರೈಕೆ ಮಾಡಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ್ ತಿಳಿಸಿದರು. ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಉತ್ತಮ ಮುಂಗಾರು ಮಳೆಯಾಗಿದ್ದು, ಕೃಷಿ ಚಟುವಟಿಕೆ ವೇಗ ಪಡೆದುಕೊಂಡಿದೆ. ಪ್ರತಿ ವರ್ಷ ರಸಗೊಬ್ಬರ ಕೊರತೆ ಸಮಸ್ಯೆ ಎದುರಾಗುತ್ತಿದೆ. ಇದನ್ನು ತಪ್ಪಿಸಲು ಮೊದಲು ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಮಾಡುವುದನ್ನು ತಪ್ಪಿಸಿ ರೈತರಿಗೆ ಸಮರ್ಪಕವಾಗಿ ತಲುಪಿಸುವ ವ್ಯವಸ್ಥೆ ಮಾಡಬೇಕು. ಇದನ್ನು ಬಿಟ್ಟು ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುವುದು ಸರಿಯಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

><><><><><><><><><><

ಹರಳು ರೂಪದ ಯೂರಿಯಾ ಕೊರತೆಯ ನಡುವೆ ದಾವಣಗೆರೆ ಜಿಲ್ಲೆಯಲ್ಲಿ ಡ್ರೋಣ್ ಮೂಲಕ ನ್ಯಾನೋ ಯೂರಿಯಾ ಸಿಂಪಡಣೆ, ಆಂದೋಲನ ರೂಪ ಪಡೆದಿದೆ. ಕೃಷಿ ಇಲಾಖೆ ನ್ಯಾನೋ ಯೂರಿಯಾ ಬಳಕೆಗೆ ಉತ್ತೇಜನ ನೀಡಿರುವ ಪರಿಣಾಮ ೧೦ ಡ್ರೋಣ್‌ಗಳನ್ನು ಬಳಸಿ ಪ್ರತಿದಿನ ನೂರು ಎಕ್ರೆಗೂ ಅಧಿಕ ಪ್ರದೇಶದಲ್ಲಿ ನ್ಯಾನೋ ಯೂರಿಯಾ ಸಿಂಪಡಣೆ ಮಾಡಲಾಗುತ್ತಿದೆ. ಪ್ರಸ್ತುತ ಹೆಚ್ಚು ಬೇಡಿಕೆ ಇರುವ ಮೆಕ್ಕೆಜೋಳದ ಬೆಳೆಗೆ ಹರಳು ರೂಪದ ಯೂರಿಯಾ ಬದಲು ನ್ಯಾನೋ ಯೂರಿಯಾವನ್ನು ಡ್ರೋಣ್ ಮತ್ತು ಸ್ಪ್ರೇಯರ್ ಬಳಸಿ ಸಿಂಪಡಣೆ ಮಾಡಲಾಗುತ್ತಿದೆ. ದಾವಣಗೆರೆ ತಾಲ್ಲೂಕಿನಲ್ಲಿ ೬ ಸಾವಿರ ಎಕರೆಗೂ ಅಧಿಕ ಪ್ರದೇಶದಲ್ಲಿ ನ್ಯಾನೋ ಯೂರಿಯಾ ಸಿಂಪಡಣೆ ಮಾಡಲಾಗಿದೆ ಎಂದು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಶ್ರೀಧರ ಮೂರ್ತಿ ತಿಳಿಸಿದ್ದಾರೆ.

ಧ್ವನಿ: ಶ್ರೀಧರ ಮೂರ್ತಿ, ಸಹಾಯಕ ಕೃಷಿ ನಿರ್ದೇಶಕ

><><><><><><><><><><

ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡಣವೀಸ್ ಆಲಮಟ್ಟಿ ಬಳಿ ನಿರ್ಮಿಸಿರುವ ಆಣೆಕಟ್ಟು ಎತ್ತರ ಹೆಚ್ಚಿಸುವುದಕ್ಕೆ ಅನವಶ್ಯಕವಾಗಿ ಅಡ್ಡಗಾಲು ಹಾಕುತ್ತಿರುವುದು ಸರಿಯಲ್ಲ ಎಂದು ಯಾದಗಿರಿ

ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಹಾಗೂ ಮಹಾರಾಷ್ಟ್ರ ಸರ್ಕಾರಗಳು ವ್ಯವಸ್ಥಿತವಾಗಿ ಕರ್ನಾಟಕದ ಪಾಲಿನ ನೀರಿನ ಹಕ್ಕನ್ನು ರಾಜಕೀಯವಾಗಿ ಕಸಿದುಕೊಳ್ಳುವ ವ್ಯರ್ಥ ಪ್ರಯತ್ನ ಮಾಡುತ್ತಿವೆ. ಈಗಾಗಲೇ ನ್ಯಾಯಮಂಡಳಿಯಿಂದ ತೀರ್ಪು ಹೊರ ಬಿದ್ದು ಹಲವು ವರ್ಷಗಳು ಸಂದಿವೆ. ಸರ್ಕಾರದ ಮುಂದಿರುವ ಏಕೈಕ ಮಾರ್ಗ ನೋಟಿಫಿಕೇಶನ್ ಹೊರಡಿಸುವುದು ಮಾತ್ರ ಬಾಕಿ ಇದೆ. ಕೃಷ್ಣಾ ನದಿಯ ಕರ್ನಾಟಕ ಪಾಲಿನ ನೀರನ್ನು ಕಾನೂನು ಹೋರಾಟದ ಮೂಲಕ ಪಡೆದುಕೊಂಡಿದ್ದು, ಕಲ್ಯಾಣ ಕರ್ನಾಟಕ ಭಾಗದ ರೈತರು ದಂಗೆ ಏಳುವ ಸ್ಥಿತಿ ಸರ್ಕಾರಗಳು ನಿರ್ಮಾಣ ಮಾಡಬಾರದು ಎಂದು ಅವರು ಹೇಳಿದ್ದಾರೆ.

><><><><><><><><><><

ಚುನಾವಣಾ ಆಯೋಗವು ಬೂತ್ ಮಟ್ಟದ ಅಧಿಕಾರಿಗಳ ಸಂಭಾವನೆಯನ್ನು ದ್ವಿಗುಣಗೊಳಿಸಿದೆ ಮತ್ತು ಮತದಾರರ ಪಟ್ಟಿಯ ತಯಾರಿಕೆ ಮತ್ತು ಪರಿಷ್ಕರಣೆಯಲ್ಲಿ ತೊಡಗಿರುವ ಬಿಎಲ್‌ಒ ಮೇಲ್ವಿಚಾರಕರ ಸಂಭಾವನೆಯನ್ನು ಹೆಚ್ಚಿಸಿದೆ. ಬಿಎಲ್‌ಒಗಳ ವಾರ್ಷಿಕ ಸಂಭಾವನೆಯನ್ನು ಆರು ಸಾವಿರ ರೂಪಾಯಿಗಳಿಂದ ಹನ್ನೆರಡು ಸಾವಿರ ರೂಪಾಯಿಗಳಿಗೆ ದ್ವಿಗುಣಗೊಳಿಸಲಾಗಿದೆ ಎಂದು ಚುನಾವಣಾ ಆಯೋಗ ಹೇಳಿಕೆಯಲ್ಲಿ ತಿಳಿಸಿದೆ. ಹೆಚ್ಚುವರಿಯಾಗಿ, ಮತದಾರರ ಪಟ್ಟಿಗಳ ಪರಿಷ್ಕರಣೆಗಾಗಿ ಬಿಎಲ್‌ಒಗಳಿಗೆ ಪ್ರೋತ್ಸಾಹಧನವನ್ನು ಒಂದು ಸಾವಿರ ರೂಪಾಯಿಗಳಿಂದ ಎರಡು ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.

><><><><><><><><><><

ದೆಹಲಿಯ ಕೆಂಪುಕೋಟೆಯಲ್ಲಿ ಇದೇ ೧೫ ರಂದು ನಡೆಯಲಿರುವ ಸ್ವಾತಂತ್ರೋತ್ಸವ ಕಾರ್ಯಕ್ರಮಕ್ಕೆ ಕರ್ನಾಟಕದ ವಿವಿಧ ಜಿಲ್ಲೆಯ ಏಳು ಜನ ಗ್ರಾಮಪಂಚಾಯಿತಿ ಅಧ್ಯಕ್ಷರನ್ನು ವಿಶೇಷ ಅತಿಥಿಗಳಾಗಿ ಭಾಗವಹಿಸಲು ಅಹ್ವಾನ ನೀಡಲಾಗಿದೆ. ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಆನೆಗೊಂದಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಹುಲಿಗೆಮ್ಮ ಹೊನ್ನಪ್ಪ ನಾಯಕ, ಶೃಂಗೇರಿ ತಾಲೂಕಿನ ಕೆರೆ ಗ್ರಾಮಪಂಚಾಯಿತಿ ಅಧ್ಯಕ್ಷೆ ಲಕ್ಷ್ಮೀ ಗೋಪಾಲ್, ಕೊಡಗು ಜಿಲ್ಲೆಯ ಹುಡುಕೇರಿ ಗ್ರಾಮಪಂಚಾಯಿತಿ ಅಧ್ಯಕ್ಷೆ ಕಾವೇರಮ್ಮ, ಬೆಳ್ತಂಗಡಿ ತಾಲೂಕಿನ ಉಜಿರೆ ಗ್ರಾಮಪಂಚಾಯಿತಿ ಅಧ್ಯಕ್ಷೆ ಉಷಾಕಿರಣ, ತುಮಕೂರು ತಾಲೂಕಿನ ಮ್ಯಾಡಾಳ ಗ್ರಾಮಪಂಚಾಯಿತಿ ಅಧ್ಯಕ್ಷ ಉಮೇಶ, ಖಾನಾಪುರ ತಾಲೂಕಿನ ನಂದಗಡ ಗ್ರಾಮಪಂಚಾಯಿತಿ ಅಧ್ಯಕ್ಷ ಯಲ್ಲಪ್ಪ, ಚಿತ್ತಾಪುರ ತಾಲೂಕಿನ ಕರಡಾಳ ಗ್ರಾಮಪಂಚಾಯಿತಿ ಅಧ್ಯಕ್ಷೆ ಮೆಮ್ತಾಜ್‌ಬೇಗಂ ಅವರಿಗೆ ಅಹ್ವಾನ ನೀಡಲಾಗಿದೆ.

><><><><><><><><><><

ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಅಕ್ಟೋಬರ್ ೨ ರವರೆಗೆ ರಾಜಿ ಸಂಧಾನದ ಮೂಲಕ ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ೯೦ ದಿನಗಳ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಮರಳು ಸಿದ್ದಾರಾಧ್ಯ ಹೇಳಿದ್ದಾರೆ. ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ನ್ಯಾಯಾಲಯಗಳಿಂದ ಪ್ರಕರಣಗಳನ್ನು ಮಧ್ಯಸ್ಥಿಕೆ

ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆಸಿಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಛಯ ದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಾಗೂ ತಾಲೂಕು ನ್ಯಾಯಾಲಯಗಳು ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು.

><><><><><><><><><><><